ಇ) ಈ ವಸತಿ ಶಾಲೆಗಳಲ್ಲಿ ಒಟ್ಟು 136 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ

579 (378) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರೀಯ ಪರಿಶಿಷ್ಟ ಜಾತಿ/ಪಂಗಡದ ಆಯೋಗದ ಅಧ್ಯಕ್ಷರಾದ ಫಕೀರ್ ಭಾಯಿ ವಗೇಲಾ ಬೆಂಗಳೂರಿಗೆ ಬಂದು ಬ್ಯಾಕ್‌ಲಾಗ್ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಿ ಎಂದು ಕೊಟ್ಟ ಸೂಚನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ?

ಆ) ಪರಿಗಣಿಸಿದ್ದಲ್ಲಿ ಸೂಚನೆ ಕೊಟ್ಟ ದಿನಾಂಕದ ನಂತರ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು).

ಅ) ಹೌದು

ಆ) ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗದ ಅಧ್ಯಕ್ಷರು ಬ್ಯಾಕ್‌ಲಾಗ್ ಹುದ್ದೆಗಳನ್ನು ಶೀಘ್ರ ಭರ್ತಿಗೆ ಸೂಚನೆ ನೀಡುವ ಮುಂಚೆ ಹಾಗೂ ನಂತರದಲ್ಲಿಯೂ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪರಶೀಲಿಸಲು ರಚಿತವಾಗಿರುವ ಸಚಿವ ಸಂಪುಟ ಉಪಸಮಿತಿಯು ಅಗತ್ಯ ಸಲಹೆ, ಸೂಚನೆ, ಮಾರ್ಗದರ್ಶನಗಳನ್ನು ನೀಡುತ್ತಿದೆ ಅದರಂತೆ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಕಾರ್ಯವು ನಿರಂತರವಾಗಿ ನಡೆಯುತ್ತಿದೆ

581 (711) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ) ಎಂ ಎಲ್.ಎ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 2003–04, 2004–05, 2005–06, ಹಾಗೂ 2006–07 ರಲ್ಲಿ ವರದಿಯಾಗಿರುವ ಏಡ್ಸ್ ಪ್ರಕರಣಗಳೆಷ್ಟು?

ಆ) ಈ ಪ್ರಕರಣಗಳನ್ನು ರಾಷ್ಟ್ರೀಯ ಸರಾಸರಿ ಪ್ರಕರಣಗಳಿಗೆ ಹೋಲಿಸಿದಾಗ ಕಂಡು ಬರುವ ವಿವರಗಳೇನು?